ಕರ್ನಾಟಕ ವಿಧಾನ ಸಭೆ

ಶುಕ್ರವಾರ 27ನೇ ಜುಲೈ 2007ರಂದು ಸದನವು
ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ
ಬೆಳಿಗ್ಗೆ 10 ಗಂಟೆ 35 ನಿಮಿಷಕ್ಕೆ ಸಮಾವೇಶಗೊಂಡಿತು.
ಅಧ್ಯಕ್ಷರು : ಶ್ರೀ ಕೃಷ್ಣರವರು ಪೀಠವನ್ನು ಅಲಂಕರಿಸಿದ್ದರು.

(10–00 AM)

1. ವರದಿಯನ್ನೊಪ್ಪಿಸುವುದು :

2006–07ನೇ ಸಾಲಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 18ನೇ ವರದಿ :

ಶ್ರೀಮತಿ ಶಕುಂತಲಾ ಟಿ.ಶೆಟ್ಟಿ : ಮಾನ್ಯ ಅಧ್ಯಕ್ಷರೆ, 12ನೇ ವಿಧಾನ ಸಭೆಯ 2006–07ನೇ ಸಾಲಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆಯಾದ ನಾನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಸತಿ ಇಲಾಖೆ, ಉದ್ಯೋಗ ಮತ್ತು ತರಬೇತಿ ಇಲಾಖೆ, ಯುವಜನ ಮತ್ತು ಕ್ರೀಡಾ ಇಲಾಖೆ, ಪಶುಸಂಗೋಪನಾ ಹಾಗೂ ಮೀನುಗಾರಿಕಾ ಇಲಾಖೆ ಹಾಗೂ ಸಹಕಾರ ಇಲಾಖೆಗಳ ಕಾರ್ಯಚಟುವ ಟಿಕೆಗಳಿಗೆ ಸಂಬಂಧಿಸಿದ 18ನೇ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ಒಪ್ಪಿಸಲಾಯಿತು.

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು :

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು (ಶ್ರೀ ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ ಭಾರತದ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು 31ನೇ ಮಾರ್ಚ್, 2006ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಪಂಚಾಯತ್‌ರಾಜ್ ಸಂಸ್ಥೆಗಳ ಲೆಕ್ಕ ಪರಿಶೋಧನಾ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :

I (ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯಮಂತ್ರಿ) ಅವರ ಪರವಾಗಿ)

ವಿಚಾರಣಾ ಆಯೋಗದ ಕಾಯ್ದೆ 1952ರ ಕಲಂ 3(4)ರ ಅನ್ವಯ :

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ :

1. ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ 2006–07ನೇ ಸಾಲಿನ ವಾರ್ಷಿಕ ವರದಿ.

ಜಲಮಂಡಳಿಯ 1964ರ ಕಾಯ್ದೆಯ ಕಲಂ 25ರ ಪ್ರಕಾರ :

1. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2007–08ನೇ ಸಾಲಿನ ಪರಿಷ್ಕೃತ ಆಯವ್ಯಯ ಪಟ್ಟಿ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆಯ 1976ರ ಕಲಂ 47ರ ಪ್ರಕಾರ :

1. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 2005–06ನೇ ಸಾಲಿನ ಪ್ರಮಾಣೀಕೃತ ಲೆಕ್ಕಪತ್ರಗಳ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :

II (ಶ್ರೀ ಕೆ.ಎಸ್.ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)ಅವರ ಪರವಾಗಿ)

ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ 1980ರ ಅಧಿನಿಯಮ 24ರ ಪ್ರಕಾರ :

1. ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಮಲಪ್ರಭಾ ಮತ್ತು ಘಟಪ್ರಭಾ ಯೋಜನೆಗಳು, ಬೆಳಗಾವಿಯ 2006–07ನೇ ಸಾಲಿನ ವಾರ್ಷಿಕ ವರದಿ.
2. ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕಾವೇರಿ ಜಲಾನಯನ ಯೋಜನೆಗಳು, ಮೈಸೂರಿನ 2006–07ನೇ ಸಾಲಿನ ವಾರ್ಷಿಕ ವರದಿ ಮತ್ತು ಸ್ಥಿತಿ ವಿವರಣಾ ಪಟ್ಟಿಯನ್ನು ಮಂಡಿಸುತ್ತೇನೆ.

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :

III (ಶ್ರೀ ಡಿ.ಟಿ.ಜಯಕುಮಾರ್ (ವಸತಿ ಸಚಿವರು) ಅವರ ಪರವಾಗಿ)

ಕರ್ನಾಟಕ ಗೃಹ ಮಂಡಲಿಯ 1962ರ ಕಾಯ್ದೆ ಕಲಂ 55(3)ರ ಪ್ರಕಾರ :

1. ಕರ್ನಾಟಕ ಗೃಹ ಮಂಡಲಿಯ 2006–07ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :

IV (ಶ್ರೀ ಸಿ.ಎಂ.ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಪರವಾಗಿ)

1993 ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 262(3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ :

1. ಬೆಂಗಳೂರು ಗ್ರಾಮಾಂತರ ಜಿಲ್ಲಾಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕ ತನಿಖಾ ವರದಿ.
2. ದಕ್ಷಿಣ ಕನ್ನಡ ಜಿಲ್ಲಾಪಂಚಾಯತ್, ಮಂಗಳೂರಿನ 2005–06 ನೇ ಸಾಲಿನ ವಾರ್ಷಿಕ ಆಡಳಿತ ವರದಿ.
3. ರಾಯಚೂರು ಜಿಲ್ಲಾಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಆಡಳಿತ ವರದಿ.
4. ಕೊಪ್ಪಳ ಜಿಲ್ಲಾಪಂಚಾಯತ್‌ನ 2004–05ನೇ ಸಾಲಿನ ದೃಢೀಕರಿಸಿದ ವಾರ್ಷಿಕ ಲೆಕ್ಕ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :

V (ಶ್ರೀ ಕಟ್ಟಾಸುಬ್ರಮಣ್ಯ ನಾಯ್ಡು (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ರ ಪರವಾಗಿ)

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತದ 30ನೇ 2005–2006ನೇ ಸಾಲಿನ ವಾರ್ಷಿಕ ವರದಿ.
2. ಮೈಸೂರು ಮಿನರಲ್ಸ್ ನಿಯಮಿತದ 40ನೇ 2005–2006ನೇ ಸಾಲಿನ ವಾರ್ಷಿಕ ವರದಿ.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಲಿಯ 1966ರ ಕಾಯ್ದೆ ಕಲಂ 28(4)ರ ಪ್ರಕಾರ :

1. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಲಿಯ 2004–05ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.